# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 122(1421) |
| ಮಾನ್ಯ ಸದಸ್ಯರ ಹೆಸರು | ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23/09/2021 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಈವರೆಗೂ ನೋಂದಣಿ ಆಗಿರುವ ಕಾರ್ಮಿಕರ ಸಂಖ್ಯೆ ಎಷ್ಟು; | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ** ದಿನಾಂಕ: 31-07-2021ರವರೆಗೆ 30.39 ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಯಾಗಿ ನೋಂದಣಿಯಾಗಿರುತ್ತಾರೆ.<br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ** ಮಂಡಳಿಯಲ್ಲಿ ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.<br>**1. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:**<br>ಈ ಯೋಜನೆಯಡಿ, ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನಾ ಪರವಾನಗಿ ಹೊಂದಿರುವ ಎಲ್ಲಾ ಚಾಲಕರನ್ನು ಫಲಾನುಭವಿಗಳೆಂದು ಪರಿಗಣಿಸಲಾಗಿದ್ದು, ಸಾರಿಗೆ ಇಲಾಖೆಯು ಒದಗಿಸಿರುವ ದತ್ತಾಂಶದ ಪ್ರಕಾರ ಈವರೆಗೆ 8,40,561 ಚಾಲಕರು ಊರ್ಜಿತ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲನಾ ಪರವಾನಗಿ ಹೊಂದಿರುತ್ತಾರೆ.<br>**2. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:**<br>ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ ಹಮಾಲರು, ಗೃಹ ಕಾರ್ಮಿಕರು, ಚಿಂದಿ ಆಯುವವರು, ಟೈಲರ್‌ಗಳು, ಮೆಕ್ಯಾನಿಕ್ಸ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ ವೃತ್ತಿಯ 2,16,900 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದೆ.<br>**3. ಕೋವಿಡ್-19ರ ಮೊದಲನೇ ಅಲೆಯ ವಿಶೇಷ ಪ್ಯಾಕೇಜ್:-**<br>ಕೋವಿಡ್-19ರ, ಮೊದಲನೇ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ ಅಗಸರು ಮತ್ತು ಕ್ಷೌರಿಕರ ವೃತ್ತಿ ಕಾರ್ಮಿಕರಿಗೆ ಸರ್ಕಾರವು ಘೋಷಿಸಿದ ವಿಶೇಷ ಪ್ಯಾಕೇಜ್ ಅಡಿ 1,41,602 ಕಾರ್ಮಿಕರು ಒಂದು ಬಾರಿಯ ರೂ.5,000/-ಗಳ ನೆರವನ್ನು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. |

| | | |
|---|---|---|
| | | **4. ಕೋವಿಡ್-19ರ ಎರಡನೇ ಅಲೆಯ ವಿಶೇಷ ಪ್ಯಾಕೇಜ್:-** ಕೋವಿಡ್-19ರ, ಎರಡನೇ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ" ವೃತ್ತಿ ಕಾರ್ಮಿಕರಿಗೆ ಘೋಷಿಸಿದ ವಿಶೇಷ ಪ್ಯಾಕೇಜ್ ಅಡಿ 14,52,943 ಕಾರ್ಮಿಕರು ಒಂದು ಬಾರಿಯ ರೂ.2,000/-ಗಳ ನೆರವನ್ನು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. |
| ಆ) | ನೋಂದಣಿ ಆಗದೆ ಇರುವ ಕಟ್ಟಡ ಮತ್ತು ವಲಸೆ ಕಾರ್ಮಿಕರ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆ ಹಾಗೂ ವಲಸೆ ಕಾರ್ಮಿಕರ ಸಮೀಕ್ಷೆಯನ್ನು ಇಲಾಖೆಯಿಂದ ಕೈಗೊಂಡಿರುವುದಿಲ್ಲ. ಆದ್ದರಿಂದ ನೋಂದಣಿ ಆಗದೆ ಇರುವ ಕಟ್ಟಡ ಮತ್ತು ವಲಸೆ ಕಾರ್ಮಿಕರ ಸಂಖ್ಯೆಯು ಲಭ್ಯವಿರುವುದಿಲ್ಲ. |
| (ಇ) | ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣದ ಕಾರ್ಮಿಕರಿಗೆ ಮೀಸಲಿಟ್ಟಿರುವ ಅನುದಾನ ಎಷ್ಟು; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ, 1996 ಮತ್ತು ನಿಯಮ, 1998ರ ಪ್ರಾವಧಾನಗಳನ್ವಯ ಕಟ್ಟಡ ಕಾಮಗಾರಿಗಳ ಮೇಲೆ ಶೇ.1ರಷ್ಟು ಸುಂಕ ಮೊತ್ತವನ್ನು ಸಂಗ್ರಹಿಸಲಾಗುತ್ತಿದೆ. ಈ ಮೊತ್ತದಲ್ಲಿ ಮಂಡಳಿಯ ಫಲಾನುಭವಿಗಳಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ದಿನಾಂಕ: 31-08-2021ರ ಅಂತ್ಯಕ್ಕೆ ಮಂಡಳಿಯಲ್ಲಿ ಸೆಸ್ ರೂಪದಲ್ಲಿ ರೂ.7,709.06 ಕೊಟಿ ಮೊತ್ತವು ಸಂಗ್ರಹವಾಗಿರುತ್ತದೆ.<br>ಮಂಡಳಿಯ 2021-22 ನೇ ಸಾಲಿನ ಆಯವ್ಯಯದಲ್ಲಿ ರೂ.2,608.00 ಕೋಟಿ ಮೊತ್ತವನ್ನು ನೋಂದಾಯಿತ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳಡಿ ಸಹಾಯ ಧನ ವಿತರಿಸಲು ಮೀಸಲಿಡಲಾಗಿರುತ್ತದೆ. |
| (ಈ) | 2006 ರಿಂದ 2007ನೇ ಸಾಲಿನವರೆಗೆ ಕಟ್ಟಡ ಮಾಲೀಕರಿಂದ ಸೆಸ್ (ಕರ) ರೂಪದಲ್ಲಿ ಸಂಗ್ರಹವಾದ ಹಣ ಎಷ್ಟು? | ದಿನಾಂಕ: 18-1-2007ರಂದು ಹೊರಡಿಸಲಾದ ಅಧಿಸೂಚನೆಯ ಅನ್ವಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ರಚನೆಯಾಗಿದ್ದು, ತದನಂತರ ಕರ್ನಾಟಕದಲ್ಲಿ ನಿರ್ಮಾಣ ಕಾಮಗಾರಿಗಳ ಮೇಲೆ ಸುಂಕ ಸಂಗ್ರಹಣೆಯೂ ಪ್ರಾರಂಭವಾಗಿರುತ್ತದೆ.<br>ಆದುದರಿಂದ 2006 ರಿಂದ 2007 ನೇ (ಏಪ್ರಿಲ್ 2006 ರಿಂದ ಮಾರ್ಚ್ 2007 ರವರೆಗೆ) ಸಾಲಿನಲ್ಲಿ ಮಂಡಳಿಗೆ ಕಟ್ಟಡ ಕಾಮಗಾರಿಗಳಿಂದ ಸುಂಕ ರೂಪದಲ್ಲಿ ಯಾವುದೇ ಹಣ ಸಂಗ್ರಹವಾಗಿರುವುದಿಲ್ಲ. |

**ಕಾಇ 421 ಎಲ್‌ಇಟಿ 2021**

(ಅರಬೈಲ್ ಶಿವರಾಮ ಹೆಬ್ಬಾರ್)
ಕಾರ್ಮಿಕ ಸಚಿವರು